# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ದಾಸರಹಳ್ಳಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಗೆ ಸಂಬಂಧಿಸಿದಂತೆ "ಮುಖ್ಯಮಂತ್ರಿಗಳ ಅಮೃತ ನಗರೋತ್ಥಾನ" ಯೋಜನೆಯಡಿ ನಿಗಧಿಪಡಿಸಿರುವ ರೂ.110.00 ಕೋಟಿಗಳ ಅಂದಾಜು ಮೊತ್ತದ ಕಾಮಗಾರಿಗಳ ಕ್ರಿಯಾ ಯೋಜನೆಗೆ ಸರ್ಕಾರದ ಅನುಮೋದನೆ ನೀಡುವ ಬಗ್ಗೆ.

**ಓದಲಾಗಿದೆ:**

1. ಮಾನ್ಯ ಮುಖ್ಯಮಂತ್ರಿಗಳು ದಿನಾಂಕ: 15-08-2021 ರಂದು ಭಾರತದ ಸ್ವಾತಂತ್ರ್ಯೋತ್ಸವದ 75ನೇ ವರ್ಷದ ಆಚರಣೆ ಸಂದರ್ಭದಲ್ಲಿ ಮಾಡಿರುವ ಘೋಷಣೆ.
2. ಸರ್ಕಾರದ ಆದೇಶ ಸಂಖ್ಯೆ: ನಅಇ 197 ಎಂಎನ್‌ವೈ 2021 (ಇ), ದಿನಾಂಕ: 14-01-2022.
3. ಸರ್ಕಾರದ ಆದೇಶ ಸಂಖ್ಯೆ: ನಅಇ 197 ಎಂಎನ್‌ವೈ 2021 (ಇ), ದಿನಾಂಕ: 25-02-2022 (9).
4. ಮುಖ್ಯ ಆಯುಕ್ತರು, ಬಿಬಿಎಂಪಿ ಇವರ ಪತ್ರ ಸಂಖ್ಯೆ: ಮು.ಆ/ಪಿ.ಆರ್/5047/ 2021-22, ದಿನಾಂಕ: 24.03.2022.

*****

**ಪ್ರಸ್ತಾವನೆ:**

ಮೇಲೆ ಕ್ರಮ ಸಂಖ್ಯೆ: (1) ರಲ್ಲಿ ಓದಲಾದ ದಿನಾಂಕ: 15-08-2021 ರಂದು ಭಾರತದ ಸ್ವಾತಂತ್ರ್ಯೋತ್ಸವದ 75ನೇ ವರ್ಷದ ಆಚರಣೆ ಸಂದರ್ಭದಲ್ಲಿ ಮಾನ್ಯ ಮುಖ್ಯಮಂತ್ರಿಗಳು ಮಾಡಿರುವ ಸ್ವಾತಂತ್ರ್ಯೋತ್ಸವ ಭಾಷಣದಲ್ಲಿ ಬೆಂಗಳೂರು ನಗರದಲ್ಲಿ ಬಿಬಿಎಂಪಿ ಮೂಲಕ ಮುಖ್ಯ ಮೂಲಭೂತ ಸೌಕರ್ಯ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲು ಅಮೃತ ನಗರೋತ್ಥಾನ ಯೋಜನೆ ಅಡಿಯಲ್ಲಿ ರೂ.6000.00 ಕೋಟಿಗಳನ್ನು ಒದಗಿಸಲಾಗುವುದು ಎಂದು ಘೋಷಿಸಿರುತ್ತಾರೆ.

ಮೇಲೆ ಕ್ರಮ ಸಂಖ್ಯೆ: (2) ರಲ್ಲಿ ಓದಲಾದ ದಿನಾಂಕ: 14-01-2022ರ ಆದೇಶದಲ್ಲಿ, ಮಾನ್ಯ ಮುಖ್ಯಮಂತ್ರಿಗಳು ದಿನಾಂಕ: 15-08-2021 ರಂದು ಭಾರತದ ಸ್ವಾತಂತ್ರ್ಯೋತ್ಸವದ 75ನೇ ವರ್ಷದ ಸಂದರ್ಭದಲ್ಲಿ ಘೋಷಿಸಿದ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ಮೂಲಸೌಕರ್ಯ ಅಭಿವೃದ್ಧಿ ಕಾಮಗಾರಿಗಳಿಗೆ ಸಂಬಂಧಿಸಿದ ರೂ.6000.00 ಕೋಟಿಗಳ ಅಂದಾಜು ಮೊತ್ತದಲ್ಲಿ ಕೈಗೊಳ್ಳುವ "ಮುಖ್ಯಮಂತ್ರಿಗಳ ಅಮೃತ ನಗರೋತ್ಥಾನ" ಯೋಜನೆಗೆ ಸರ್ಕಾರದ ತಾತ್ವಿಕ ಅನುಮೋದನೆ ನೀಡಿ ಆದೇಶಿಸಿದೆ.

ಮೇಲೆ ಕ್ರಮ ಸಂಖ್ಯೆ: (3) ರಲ್ಲಿ ಓದಲಾದ ದಿನಾಂಕ: 25-02-2022 (9) ರ ಆದೇಶದಲ್ಲಿ, ಸರ್ಕಾರದ ಆದೇಶ ಸಂಖ್ಯೆ: ನಅಇ 197 ಎಂಎನ್‌ವೈ 2021 (ಇ), ದಿನಾಂಕ: 14-01-2022 ರಂತೆ ಅನುಮೋದಿಸಲಾಗಿರುವ "ಮುಖ್ಯಮಂತ್ರಿಗಳ ಅಮೃತ ನಗರೋತ್ಥಾನ" ಯೋಜನೆಗೆ ಸಂಬಂಧಿಸಿದಂತೆ ದಾಸರಹಳ್ಳಿ ವಿಧಾನ ಸಭಾ ಕ್ಷೇತ್ರಕ್ಕೆ ರೂ.110.00 ಕೋಟಿ ಗಳ ಅನುದಾನವನ್ನು ನಿಗಧಿಗೊಳಿಸಿ ಆದೇಶಿಸಲಾಗಿರುತ್ತದೆ.

...2/-

ಸರ್ಕಾರದ ಅಧೀನ ಕಾರ್ಯದರ್ಶಿ
ನಗರಾಭಿವೃದ್ಧಿ ಇಲಾಖೆ (ಬಿ.ಬಿ.ಎಂ.ಪಿ.)

ಮೇಲೆ ಕ್ರಮ ಸಂಖ್ಯೆ: (4) ರಲ್ಲಿ ಓದಲಾದ ದಿನಾಂಕ: 24.03.2022 ರ ಪತ್ರದಲ್ಲಿ, ಮುಖ್ಯ ಆಯುಕ್ತರು, ಬಿಬಿಎಂಪಿ ರವರು, ಸರ್ಕಾರದ ಆದೇಶ ಸಂಖ್ಯೆ: ನಅಇ 197 ಎಂಎನ್ ವೈ 2021, ದಿನಾಂಕ: 25.02.2022 ರಲ್ಲಿ ದಾಸರಹಳ್ಳಿ ವಿಧಾನಸಭಾ ಕ್ಷೇತ್ರಕ್ಕೆ ಒಟ್ಟು 110.00 ಕೋಟಿಗಳ ಅನುದಾನ ನಿಗಧಿಪಡಿಸಲಾಗಿದೆ. ದಾಸರಹಳ್ಳಿ ವಿಧಾನಸಭಾ ಕ್ಷೇತ್ರದ ಮಾನ್ಯ ಶಾಸಕರೊಂದಿಗೆ ಚರ್ಚಿಸಿ, ಕ್ರಿಯಾಯೋಜನೆಯನ್ನು ಸಿದ್ಧಪಡಿಸಿ, ಮುಖ್ಯ ಅಭಿಯಂತರರು ದಾಸರಹಳ್ಳಿ ವಲಯ ರವರು ಸಲ್ಲಿಸಿರುತ್ತಾರೆ.

ಆದುದರಿಂದ, ರೂ.110.00 ಕೋಟಿಗಳ ಅಂದಾಜು ಮೊತ್ತದ ಕಾಮಗಾರಿಗಳ ಕ್ರಿಯಾಯೋಜನೆಗೆ ಸರ್ಕಾರದ ಅನುಮೋದನೆ ನೀಡುವಂತೆ ಬಿಬಿಎಂಪಿ ಮುಖ್ಯ ಆಯುಕ್ತರು ಕೋರಿರುತ್ತಾರೆ.

ಬಿಬಿಎಂಪಿ ಮುಖ್ಯ ಆಯುಕ್ತರ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿದ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ನಅಇ 153 ಎಂಎನ್‌ವೈ 2022 (ಇ),**
**ಬೆಂಗಳೂರು, ದಿನಾಂಕ: 08-04-2022**

ಸರ್ಕಾರದ ಆದೇಶ ಸಂಖ್ಯೆ: ನಅಇ 197 ಎಂಎನ್‌ವೈ 2021 (ಇ), ದಿನಾಂಕ: 25-02-2022 (9) ರಂತೆ "ಮುಖ್ಯಮಂತ್ರಿಗಳ ಅಮೃತ ನಗರೋತ್ಥಾನ" ಯೋಜನೆಯಡಿ ದಾಸರಹಳ್ಳಿ ವಿಧಾನ ಸಭಾ ಕ್ಷೇತ್ರಕ್ಕೆ ರೂ.110.00 ಕೋಟಿಗಳ ಅನುದಾನವನ್ನು ನಿಗದಿಗೊಳಿಸಿ ಆದೇಶಿಸಿದ್ದು, ಬಿಬಿಎಂಪಿ ಮುಖ್ಯ ಆಯುಕ್ತರ ಪ್ರಸ್ತಾವನೆಯಂತೆ, ಸದರಿ ರೂ.110.00 ಕೋಟಿಗಳ ಅಂದಾಜು ಮೊತ್ತದ ಈ ಕೆಳಕಂಡ ಕಾಮಗಾರಿಗಳ ಕ್ರಿಯಾಯೋಜನೆ ಪಟ್ಟಿಗೆ ಈ ಆದೇಶದಲ್ಲಿ ನಮೂದಿಸಿರುವ ಷರತ್ತುಗಳಿಗೊಳಪಟ್ಟು ಸರ್ಕಾರದ ಅನುಮೋದನೆ ನೀಡಿ ಆದೇಶಿಸಿದೆ.

| Sl. No. | Ward no. | Name of Work (Major Roads) | Estimated Cost(Rs. In Lakhs) |
|---|---|---|---|
| 1 | 39 | Widening and Improvements to roads, drains, footpath and medians, installation of street lights at Nelagadaranahalli & HMT main road from Tumkur main Road (NH-4) to Ganga International School in ward no 39 from Road Infrastructure Division, Dasrahalli Zone | 2000.00 |
| | | **Name of Work (Ward Roads)** | |
| 2 | 12 | Comprehensive Development works in Abbigere surrounding area in Ward No.12 Shettyhalli, Shettyhalli Sub Division. | 300.00 |

. . .3/-

ಸರ್ಕಾರದ ಅಧೀನ ಕಾರ್ಯದರ್ಶಿ
ನಗರಾಭಿವೃದ್ಧಿ ಇಲಾಖೆ (ಬಿ.ಬಿ.ಎಂ.ಪಿ.)

| | | | |
|---|---|---|---|
| 3 | 12 | Comprehensive Development works in Babanna Layout surrounding area in Ward No.12 Shettyhalli, Shettyhalli Sub Division. | 200.00 |
| 4 | 12 | Comprehensive Development works in KG Halli surrounding area in Ward No.12 Shettyhalli, Shettyhalli Sub Division. | 700.00 |
| 5 | 12 | Comprehensive Development works Shettyhalli surrounding area in Ward No.12 Shettyhalli, Shettyhalli Sub Division. | 300.00 |
| 6 | 13 | Comprehensive development works in Mallsandra Ward no 13. | 300.00 |
| 7 | 14 | Comprehensive Development works in MEI Layout & Bagalagunte Village, Sidedahalli Village Surrounding area in Ward no 14 Bagalagunte. | 400.00 |
| 8 | 14 | Comprehensive development works in Vishveshwaraiah Layout Surrounding area in Ward no 14 Bagalagunte. | 300.00 |
| 9 | 14 | Comprehensive development works in Sheshadri Layout & BTS Layout, Bhuvaneshwari Nagara Village Surrounding area in Ward no 14 Bagalagunte. | 450.00 |
| 10 | 14 | Comprehensive development works in M.S.Ramaiah Layout, Soap factory Layout & Manjunatha Nagara Surrounding area in Ward no 14 Bagalagunte. | 300.00 |
| 11 | 15 | Comprehensive development works in Kempegowda Nagara & Bhuvaneshwari Nagara Surrounding area in Ward no 15 Dasarahalli. | 150.00 |
| 12 | 15 | Comprehensive development works in KalahastiNagara & Model Colony Surrounding area in Ward no 15 Dasarahalli. | 200.00 |
| 13 | 15 | Comprehensive development works in MTS Colony & Coconut Garden Surrounding area in Ward no 15 Dasarahalli. | 150.00 |
| 14 | 39 | Comprehensive Development of Roads and Drains to Amaravathi Badavane and Eshwari Industrial Areas Surrounding Areas in ward no.39 Chokkasandra, PIA Sub Division. | 200.00 |

. . .4/-

ನಗರಾಭಿವೃದ್ಧಿ ಇಲಾಖೆ (ಬಿ.ಬಿ.ಎಂ.ಪಿ.)

| | | | |
|---|---|---|---|
| 15 | 39 | Comprehensive Development of Roads and Drains to Nelagadaranahalli Hightension Wire Roads and Main Road Surrounding Areas in ward no.39 Chokkasandra, PIA Sub Division. | 100.00 |
| 16 | 39 | Comprehensive Development of Roads and Drains to Chokkasandra Old Village Surrounding Areas in ward no.39 Chokkasandra, PIA Sub Division. | 200.00 |
| 17 | 39 | Comprehensive Development of Roads and Drains to Kempaiah Badavane (Lake Beside) Surrounding Areas in ward no.39 Chokkasandra, PIA Sub division. | 100.00 |
| 18 | 39 | Comprehensive Development of Roads and Drains to Mariswamappa Garden and Belmar Layout Surrounding Areas in ward no.39 Chokkasandra, PIA Sub Division. | 100.00 |
| 19 | 39 | Comprehensive Development of Roads and Drains to Rukmini Nagar and Jodibhavi Road, Kalyani Area Road and Hightension Road Surrounding Areas in ward no.39 Chokkasandra, PIA Sub Division. | 200.00 |
| 20 | 39 | Comprehensive Development of Roads and Drains to Gundappa Layout Surrounding Areas in ward no.39 Chokkasandra, PIA Sub Division. | 100.00 |
| 21 | 39 | Comprehensive Development of Roads and Drains to Vidya Nagar and Jamungunte Surrounding Areas in ward no.39 Chokkasandra, PIA Sub Division. | 100.00 |
| 22 | 39 | Comprehensive Development of Roads and Drains to Gruhalakshmi Layout Surrounding Areas in ward no.39 Chokkasandra, PIA Sub Division. | 100.00 |
| 23 | 41 | Comprehensive Development of Bad roads and Improvements to road side drains, Footpaths, Asphalting and Concreting including culvert to selected main and other connecting roads of Duggalamma Layout and Surrounding Areas in ward no.41 | 400.00 |
| 24 | 41 | Comprehensive Development of Bad roads and Improvements to road side drains, Footpaths, Asphalting and Concreting including culvert to selected main and other connecting roads of MEC and MEI Colony, Parvathinagar and RajeshwariNagara and Surrounding Areas in ward no.41 | 400.00 |

. . .5/-

| | | | |
|---|---|---|---|
| 25 | 41 | Comprehensive Development of Bad roads and Improvements to road side drains, Footpaths, Asphalting and Concreting including culvert to selected main and other connecting roads of Nelagadaranahalli Maramma Temple surrounding roads, shivapura, Kalyani Motors Surrounding roads, Shivapura-Sondekoppa main road Surrounding Areas in ward no.41 | 400.00 |
| 26 | 70 | Comprehensive Development of Roads and Drains From 12th Cross to 21st Cross From Doddanna Industrial Area Main Road to Srigandha Nagara Main Road & surroundings roads, Kempegowda Layout & Kasthuri Badavane in Ward No.70 | 400.00 |
| 27 | 70 | Comprehensive Development of Roads and Drains at Main roads & Cross roads of Rajagopalanagara, ShambhaviNagara, Bhyraveshwaranagara & RajeshwariNagara in Ward No.70 | 400.00 |
| 28 | 70 | Comprehensive Development of Roads and Drains at Main roads & Cross roads of Srigandha Nagara, Kareemsab Layout, Main roads & Cross roads connecting Bodubunde Anjaneya Temple road, Konika Garments surrounding roads in Ward No.70 | 400.00 |
| 29 | 71 | Comprehensive Development of Roads and Drains at Main roads and Cross roads of Srigandha Nagara, Sunkadakatte, HoysalaNagara & GajananaNagara in Ward No.71 | 400.00 |
| 30 | 71 | Comprehensive Development of Roads and drains at Main & Cross roads of Sanjeevininagara 1st stage, Sanjeevininagara 3rd stage, Sanjeevininagara 2nd stage & Lakshman Nagara in Ward No.71, Hegganahalli. | 400.00 |
| 31 | 71 | Comprehensive Development of Roads and drains at Main Cross roads of Bhyraveshwara Industrial area, Nadakerappa Industrial Area, Mayura Nagara, Friends Colony, ShivanandaNagara & Maruthi Nagar in Ward No.71, Hegganahalli. | 400.00 |

. . .6/-

ಸರ್ಕಾರದ ಅಧೀನ ಕಾರ್ಯದರ್ಶಿ
ನಗರಾಭಿವೃದ್ಧಿ ಇಲಾಖೆ (ಬಿ.ಬಿ.ಎಂ.ಪಿ.)

| | | | |
|---|---|---|---|
| 32 | 71 | Comprehensive Development works in Hegganahalli Ward No.71 | 450.00 |
| | | **TOTAL** | **11000.00** |

**ಷರತ್ತುಗಳು:**

1. ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಬರುವ ದಾಸರಹಳ್ಳಿ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ವಿವಿಧ ಮೂಲಭೂತ ಸೌಕರ್ಯ ಮತ್ತು ರಸ್ತೆಗಳ ದುರಸ್ತಿ ಮತ್ತು ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಒಟ್ಟು ರೂ.110.00 ಕೋಟಿಗಳ ಅಂದಾಜು ಮೊತ್ತದ ಕ್ರಿಯಾ ಯೋಜನೆಗೆ ಅನುಮೋದನೆ ನೀಡಿದ್ದು, ಅನುವು ಮಾಡಿರುವ ರೂ.110.00 ಕೋಟಿಗಳಿಗೆ ಮೀರಿದ ಯಾವುದೇ ವೆಚ್ಚ ಮತ್ತು ಟೆಂಡರ್ ಪ್ರೀಮಿಯಂಗಾಗಿ ಮಾಡುವ ವೆಚ್ಚವನ್ನು ಬಿಬಿಎಂಪಿಯು ತನ್ನ ಸ್ವಂತ ಅನುದಾನದಿಂದ ಭರಿಸತಕ್ಕದ್ದು. ಟೆಂಡರ್ ಪ್ರೀಮಿಯಂ ಮೊತ್ತವನ್ನು ಅಂದಾಜಿನಲ್ಲಿ ಅನುವು ಮಾಡತಕ್ಕದ್ದಲ್ಲ.

2. ಸದರಿ ಕಾಮಗಾರಿಗಳನ್ನು ರೂ.10.00 ಕೋಟಿಗಳಿಗೆ ಕಡಿಮೆ ಇರದಂತೆ ಪ್ಯಾಕೇಜ್ ಗಳನ್ನು ಮಾಡಿ, ಪ್ಯಾಕೇಜ್ ಕಾಮಗಾರಿಗಳನ್ನು ಕೆ.ಟಿ.ಪಿ.ಪಿ ಕಾಯ್ದೆ-1999 ಮತ್ತು ಕೆ.ಟಿ.ಪಿ.ಪಿ ನಿಯಮಗಳು-2000 ಹಾಗೂ e-procurement ಮುಖಾಂತರ ಕೈಗೊಂಡು, ಟೆಂಡರ್ ಗಳಿಗೆ ಸರ್ಕಾರದ ಆದೇಶ ಸಂಖ್ಯೆ: ನಅಇ 47 ಎಸ್.ಎಫ್.ಸಿ 2016. ಬೆಂಗಳೂರು, ದಿನಾಂಕ: 14-06-2016 ಮತ್ತು 03-11-2016 ರಂತೆ ಸಕ್ಷಮ ಪ್ರಾಧಿಕಾರದ ಅನುಮೋದನೆಯನ್ನು ಪಡೆದು, ಕಾಮಗಾರಿಗಳನ್ನು ಮುಂದಿನ ಎರಡು ವರ್ಷಗಳಲ್ಲಿ ಹಂತ ಹಂತವಾಗಿ ಅನುಷ್ಠಾನಗೊಳಿಸುವುದು. ಯಾವುದೇ ಕಾಮಗಾರಿಗಳನ್ನು ವಿಭಜಿಸತಕ್ಕದ್ದಲ್ಲ.

3. ಈ ಕ್ರಿಯಾ ಯೋಜನೆಯಲ್ಲಿ ಒಳಗೊಂಡಿರುವ ಕಾಮಗಾರಿಗಳು ಇತರೆ ಯಾವುದೇ ಯೋಜನೆ / ಅನುದಾನದಡಿಯಲ್ಲಿ ಪುನರಾವರ್ತನೆ ಯಾಗಿರುವುದಿಲ್ಲ ಎಂಬ ಬಗ್ಗೆ ಮುಖ್ಯ ಆಯುಕ್ತರು, ಬಿಬಿಎಂಪಿ ರವರು ಪೂರ್ವಾನ್ವಯವಾಗಿ ಖಚಿತಪಡಿಸಿಕೊಂಡು ಟೆಂಡರ್ ಆಹ್ವಾನಿಸತಕ್ಕದ್ದು.

4. ಅನುಮೋದಿತ ಕ್ರಿಯಾಯೋಜನೆಯಲ್ಲಿ ಎಸ್.ಸಿ.ಎಸ್.ಪಿ / ಟಿ.ಎಸ್.ಪಿ ಕಾಯ್ದೆ ಪ್ರಕಾರ ಕಾಮಗಾರಿಗಳನ್ನು ಅಳವಡಿಸಿಕೊಂಡು ಟೆಂಡರ್ ಕರೆದು ಅನುಷ್ಠಾನಗೊಳಿಸುವುದು ಬಿಬಿಎಂಪಿಯ ಮುಖ್ಯ ಆಯುಕ್ತರ ವೈಯಕ್ತಿಕ ಜವಾಬ್ದಾರಿಯಾಗಿರುತ್ತದೆ. ಈ ಆದೇಶ ಹೊರಡಿಸಿದ ಒಂದು ತಿಂಗಳೊಳಗಾಗಿ ಬಿಬಿಎಂಪಿಯ ಮುಖ್ಯ ಆಯುಕ್ತರು ತಮ್ಮ ಹಂತದಲ್ಲಿ ಕ್ರಿಯಾ ಯೋಜನೆಯ ಕಾಮಗಾರಿಗಳನ್ನು ಎಸ್.ಸಿ.ಎಸ್.ಪಿ / ಟಿ.ಎಸ್.ಪಿ ಕಾಯ್ದೆ ಪ್ರಕಾರ ಕಾಮಗಾರಿಗಳಾಗಿ ವಿಂಗಡಿಸಿ ಆದೇಶ ಹೊರಡಿಸಿ ಸರ್ಕಾರಕ್ಕೆ ವರದಿ ಸಲ್ಲಿಸುವುದು.

. . .7/-

ಸರ್ಕಾರದ ಅಧೀನ ಕಾರ್ಯದರ್ಶಿ
ನಗರಾಭಿವೃದ್ಧಿ ಇಲಾಖೆ (ಬಿ.ಎಂ.ಆರ್.ಡಿ.ಎ)

5. ಕಾಮಗಾರಿಗಳ ಗುಣಮಟ್ಟದ ಬಗ್ಗೆ ಸಂಬಂಧಪಟ್ಟ ಬಿಬಿಎಂಪಿಯ ಪ್ರಧಾನ ಅಭಿಯಂತರರು ಹಾಗೂ ಸಂಬಂಧಪಟ್ಟ ಮುಖ್ಯ ಅಭಿಯಂತರರುಗಳು ನಿಗಾವಹಿಸಿ, ಉತ್ತಮ ಗುಣಮಟ್ಟದ ಆಸ್ತಿ ಸೃಜನೆಗೆ ಕಟ್ಟುನಿಟ್ಟಿನ ಕ್ರಮ ವಹಿಸತಕ್ಕದ್ದು.

6. ಮುಖ್ಯ ಆಯುಕ್ತರು, ಬಿಬಿಎಂಪಿ ರವರು ಕಾಮಗಾರಿಗಳ ಗುಣಮಟ್ಟದ ಬಗ್ಗೆ ಪ್ರತಿಷ್ಠಿತ ಸಂಸ್ಥೆಗಳಿಂದ ಗುಣಮಟ್ಟದ ತಪಾಸಣಾ ಕೈಗೊಂಡು ವರದಿಯನ್ನು ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

7. ಈ ಆದೇಶದಲ್ಲಿ ಅನುಮೋದನೆ ನೀಡಿರುವ ಕಾಮಗಾರಿಗಳ ಅನುಷ್ಠಾನ ವೇಳಾಪಟ್ಟಿಯನ್ನು ಮುಖ್ಯ ಆಯುಕ್ತರು, ಬಿಬಿಎಂಪಿ ರವರು ತಯಾರಿಸಿ, ಸರ್ಕಾರಕ್ಕೆ ಸಲ್ಲಿಸತಕ್ಕದ್ದು ಹಾಗೂ ಕಾಮಗಾರಿಗಳ ಪ್ರಗತಿ ವರದಿಯನ್ನು ಪ್ರತಿ ಮಾಹೆ ಎಂಪಿಕ್ ಸಭೆಗೆ ಸರ್ಕಾರಕ್ಕೆ ತಪ್ಪದೆ ಸಲ್ಲಿಸತಕ್ಕದ್ದು.

8. ಸರ್ಕಾರವು ಅನುಮೋದನೆ ನೀಡಿರುವ ಕಾಮಗಾರಿಗಳನ್ನು ಬದಲಾವಣೆ ಮಾಡ ತಕ್ಕದ್ದಲ್ಲ. ಯಾವುದಾದರೂ ಅನುಮೋದಿತ ಕಾಮಗಾರಿಯ ಅಗತ್ಯವಿಲ್ಲವೆಂದು ಆ ನಂತರದಲ್ಲಿ ತಿಳಿದುಬಂದಲ್ಲಿ ಸಂಬಂಧಪಟ್ಟ ಅಂದಾಜು ಮೊತ್ತವನ್ನು ಉಳಿತಾಯವೆಂದು ಪರಿಗಣಿಸತಕ್ಕದ್ದು.

9. ಕರ್ನಾಟಕ ಆರ್ಥಿಕ ಸಂಹಿತೆ-1958, ಸಾಧಿಲ್ವಾರು ವೆಚ್ಚ, ಕೆಟಿಪಿಪಿ ಅಧಿನಿಯಮ ಹಾಗೂ ಕಾಲಕಾಲಕ್ಕೆ ಚಾಲ್ತಿಯಲ್ಲಿರುವ ಎಲ್ಲಾ ಕಾಯ್ದೆ ನಿಯಮಗಳನುಸಾರ ಕ್ರಮವಹಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ಲಕ್ಷ್ಮೀಸಾಗರ್ ಎನ್.ಕೆ.)**
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ (ಬಿ.ಬಿ.ಎಂ.ಪಿ.)

ಸರ್ಕಾರದ ಅಧೀನ ಕಾರ್ಯದರ್ಶಿ
ನಗರಾಭಿವೃದ್ಧಿ ಇಲಾಖೆ (ಬಿ.ಬಿ.ಎಂ.ಪಿ.)

8/4

**ಇವರಿಗೆ:**

1. ಮಹಾಲೇಖಪಾಲರು, ಲೆಕ್ಕ ತಪಾಸಣೆ/ಲೆಕ್ಕಪತ್ರ, ಕರ್ನಾಟಕ ಬೆಂಗಳೂರು.
2. ಸರ್ಕಾರದ ಮುಖ್ಯ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
4. ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
5. ಆಡಳಿತಗಾರರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಆಪ್ತ ಕಾರ್ಯದರ್ಶಿ, ಬೆಂಗಳೂರು.

6. ಮುಖ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
7. ಮುಖ್ಯ ಲೆಕ್ಕಾಧಿಕಾರಿಗಳು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
8. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ, ವಿಕಾಸಸೌಧ, ಬೆಂಗಳೂರು.
9. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.